**All India Radio: Bangalore**
**National Bulletin In Kannada**
**01.06.2026 07.35 a.m.**
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು
**01.06.2026 07.35 a.m.**
**<><><><>**

ಮುಖ್ಯಾಂಶಗಳು

1. ನವದೆಹಲಿಯಲ್ಲಿ ಇಂದು ಮ್ಯಾನ್ಮಾರ್ ಅಧ್ಯಕ್ಷರೊಂದಿಗೆ ಪ್ರಧಾನಿ ನರೇಂದ್ರ ಮೋದಿ ದ್ವಿಪಕ್ಷೀಯ ಮಾತುಕತೆ
2. 'ಖೇತ್ ಬಚಾವೋ' ಅಭಿಯಾನಕ್ಕೆ ಕೇಂದ್ರ ಕೃಷಿ ಸಚಿವ ಶಿವರಾಜ್ ಸಿಂಗ್ ಚೌಹಾಣ್ ಇಂದು ಚಾಲನೆ
3. ದೆಹಲಿಯಲ್ಲಿ ಇಂದು ಭಾರತ-ಆಸ್ಟ್ರೇಲಿಯಾ ರಕ್ಷಣಾ ಸಚಿವರ ಸಭೆ
4. ಟಿ-೨೦ ಕ್ರಿಕೆಟ್: ಸತತ ಎರಡನೇ ಬಾರಿ ಆರ್‌ಸಿಬಿಗೆ ಐಪಿಎಲ್ ಪ್ರಶಸ್ತಿ ಗರಿ

<><><><>

ಪ್ರಧಾನಿ ನರೇಂದ್ರ ಮೋದಿ ಇಂದು ನವದೆಹಲಿಯಲ್ಲಿ ಮ್ಯಾನ್ಮಾರ್ ಅಧ್ಯಕ್ಷ ಯು ಮಿನ್ ಆಂಗ್ ಹ್ಲೈಂಗ್ ಅವರೊಂದಿಗೆ ದ್ವಿಪಕ್ಷೀಯ ಮಾತುಕತೆ ನಡೆಸಲಿದ್ದಾರೆ. ಉಭಯ ದೇಶಗಳ ನಡುವಿನ ಐತಿಹಾಸಿಕ ಮತ್ತು ನಾಗರಿಕ ಸಂಬಂಧಗಳನ್ನು ಮತ್ತಷ್ಟು ಬಲಪಡಿಸುವ ಕುರಿತು ಚರ್ಚೆ ನಡೆಯಲಿದೆ. ಮಾತುಕತೆಯ ಸಮಯದಲ್ಲಿ ಭದ್ರತೆ ಮತ್ತು ಸಂಪರ್ಕ ಸೇರಿದಂತೆ ಮ್ಯಾನ್ಮಾರ್ ಮತ್ತು ಭಾರತದ ನಡುವಿನ ಸಂಬಂಧಗಳ ಬಗ್ಗೆ ಸಂಪೂರ್ಣ ವ್ಯಾಪ್ತಿಯು ಚರ್ಚೆಗೆ ಬರಲಿದೆ. ರಾಷ್ಟ್ರೀಯ ಭದ್ರತಾ ಸಲಹೆಗಾರ ಅಜಿತ್ ದೋವಲ್ ನಿನ್ನೆ ಸಂಜೆ ನವದೆಹಲಿಯಲ್ಲಿ ಮ್ಯಾನ್ಮಾರ್ ನಿಯೋಗವನ್ನು ಭೇಟಿ ಮಾಡಿದರು. ಮ್ಯಾನ್ಮಾರ್ ಅಧ್ಯಕ್ಷ ಯು ಮಿನ್ ಆಂಗ್ ಹ್ಲೈಂಗ್ ಅವರು ಮ್ಯಾನ್ಮಾರ್-ಭಾರತ ವ್ಯಾಪಾರ ವೇದಿಕೆಯನ್ನು ಉದ್ದೇಶಿಸಿ ಮಾತನಾಡಿದರು. ಮ್ಯಾನ್ಮಾರ್ ಅಧ್ಯಕ್ಷರು ಇಂದು ಸಂಜೆ ರಾಷ್ಟ್ರಪತಿ ಭವನದಲ್ಲಿ ರಾಷ್ಟ್ರಪತಿ ದ್ರೌಪದಿ ಮುರ್ಮು ಅವರನ್ನು ಭೇಟಿಯಾಗಿ ಮಾತುಕತೆ ನಡೆಸಲಿದ್ದಾರೆ. ನಾಳೆ ಅವರು ವ್ಯಾಪಾರ ಮತ್ತು ಕೈಗಾರಿಕಾ ಸಂವಹನಕ್ಕಾಗಿ ಮುಂಬೈಗೆ ಪ್ರಯಾಣಿಸಲಿದ್ದಾರೆ.

<><><><>

ಕೇಂದ್ರ ಕೃಷಿ ಮತ್ತು ರೈತ ಕಲ್ಯಾಣ ಸಚಿವ ಶಿವರಾಜ್ ಸಿಂಗ್ ಚೌಹಾಣ್ ಇಂದು ಮಧ್ಯಪ್ರದೇಶದ ರೈಸೆನ್ ಜಿಲ್ಲೆಯಿಂದ - ಖೇತ್ ಬಚಾವೋ ಅಭಿಯಾನಕ್ಕೆ ಚಾಲನೆ ನೀಡಲಿದ್ದಾರೆ. ಒಂದು ತಿಂಗಳ ಈ ಅಭಿಯಾನ ಜೂನ್ ೩೦ ರವರೆಗೆ ನಡೆಯಲಿದ್ದು, ರಸಗೊಬ್ಬರಗಳ ಸಮತೋಲಿತ ಮತ್ತು ವಿವೇಚನಾಯುಕ್ತ ಬಳಕೆ, ಹವಾಮಾನ ಸಂಬಂಧಿತ ಸವಾಲುಗಳ ದೃಷ್ಟಿಯಿಂದ ರೈತರಿಗೆ ಸಕಾಲಿಕ ಸಲಹೆ, ಪಂಚಾಯತ್ ಮಟ್ಟದಲ್ಲಿ ಸಕ್ರಿಯ ಭಾಗವಹಿಸುವಿಕೆ ಮತ್ತು ಯೋಜನೆಗಳ ಪ್ರಯೋಜನಗಳನ್ನು ನೇರವಾಗಿ ಹಳ್ಳಿಗಳಿಗೆ ತಲುಪಿಸುವ ಗುರಿ ಹೊಂದಿದೆ. ಎಲ್ಲಾ ರಾಜ್ಯಗಳ ಮುಖ್ಯಮಂತ್ರಿಗಳು, ಕೇಂದ್ರ ಸಚಿವರು ಮತ್ತು ಇತರ ಸಾರ್ವಜನಿಕ ಪ್ರತಿನಿಧಿಗಳು ಈ ಅಭಿಯಾನದಲ್ಲಿ ಭಾಗವಹಿಸುವಂತೆ ಶಿವರಾಜ್ ಸಿಂಗ್ ಚೌಹಾಣ್ ಮನವಿ ಮಾಡಿದ್ದಾರೆ.

<><><><>

ಹತ್ತು ರಾಜ್ಯಗಳಿಂದ ರಾಜ್ಯಸಭೆಯ ೨೪ ಸ್ಥಾನಗಳಿಗೆ ದ್ವೈವಾರ್ಷಿಕ ಚುನಾವಣೆಗೆ ಇಂದು ಅಧಿಸೂಚನೆ ಹೊರಡಿಸಲಾಗುವುದು ಎಂದು ಭಾರತೀಯ ಚುನಾವಣಾ ಆಯೋಗ ತಿಳಿಸಿದೆ. ಆಂಧ್ರಪ್ರದೇಶ, ಗುಜರಾತ್ ಮತ್ತು ಕರ್ನಾಟಕದಲ್ಲಿ ತಲಾ ನಾಲ್ಕು ಸ್ಥಾನಗಳು, ರಾಜಸ್ಥಾನ ಮತ್ತು ಮಧ್ಯಪ್ರದೇಶದಲ್ಲಿ ತಲಾ ಮೂರು ಸ್ಥಾನಗಳು, ಜಾರ್ಖಂಡ್‌ನಲ್ಲಿ ಎರಡು ಸ್ಥಾನಗಳು ಮತ್ತು ಮಣಿಪುರ, ಮೇಘಾಲಯ, ಅರುಣಾಚಲ ಪ್ರದೇಶ ಮತ್ತು ಮಿಜೋರಾಂನಲ್ಲಿ ತಲಾ ಒಂದು ಸ್ಥಾನಗಳಿಗೆ ಚುನಾವಣೆ ನಡೆಯಲಿದೆ. ಮಾಜಿ ಪ್ರಧಾನಿ ಮತ್ತು ಜೆಡಿಎಸ್ ವರಿಷ್ಠ

ಎಚ್.ಡಿ. ದೇವೇಗೌಡ, ಕೇಂದ್ರ ಸಚಿವ ಮತ್ತು ಬಿಜೆಪಿ ನಾಯಕರಾದ ಜಾರ್ಜ್ ಕುರಿಯನ್, ರಾಜ್ಯಸಭೆಯಲ್ಲಿ ವಿರೋಧ ಪಕ್ಷದ ನಾಯಕ ಮತ್ತು ಕಾಂಗ್ರೆಸ್ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಈ ತಿಂಗಳು ತಮ್ಮ ಅಧಿಕಾರ ಅವಧಿಯನ್ನು ಪೂರ್ಣಗೊಳಿಸುತ್ತಿರುವ ಸದಸ್ಯರಲ್ಲಿ ಸೇರಿದ್ದಾರೆ.

<><><>

ಮಹಾರಾಷ್ಟ್ರದಲ್ಲಿ, ಆಡಳಿತಾರೂಢ ಮಹಾಯುತಿ ಮೈತ್ರಿಕೂಟವು ಮುಂಬರುವ ವಿಧಾನ ಪರಿಷತ್ ಚುನಾವಣೆಗೆ ೧೭ ಸ್ಥಾನಗಳಿಗೆ ಸೀಟು ಹಂಚಿಕೆ ಸೂತ್ರವನ್ನು ಅಂತಿಮಗೊಳಿಸಿದೆ. ಒಪ್ಪಂದದ ಪ್ರಕಾರ, ಬಿಜೆಪಿ ೧೧ ಸ್ಥಾನಗಳು, ಶಿವಸೇನೆ ೪ ಸ್ಥಾನಗಳು ಮತ್ತು ರಾಷ್ಟ್ರೀಯತಾವಾದಿ ಕಾಂಗ್ರೆಸ್ ಪಕ್ಷ-ಎನ್‌ಸಿಪಿ ೨ ಸ್ಥಾನಗಳಲ್ಲಿ ಸ್ಪರ್ಧಿಸಲಿವೆ. ವಿರೋಧ ಪಕ್ಷ ಮಹಾ ವಿಕಾಸ್ ಅಘಾಡಿ, ಈ ಹಿಂದೆ ೧೭ ಸ್ಥಾನಗಳ ಪೈಕಿ ೧೫ ಸ್ಥಾನಗಳಿಗೆ ತನ್ನ ಹಂಚಿಕೆಯನ್ನು ಘೋಷಿಸಿತ್ತು. ಕಾಂಗ್ರೆಸ್ ೮ ಸ್ಥಾನಗಳು, ಶಿವಸೇನೆ-ಯುಬಿಟಿ ಬಣ ೪ ಸ್ಥಾನಗಳು ಮತ್ತು ಶರದ್ ಪವಾರ್ ನೇತೃತ್ವದ ಎನ್‌ಸಿಪಿ ೩ ಸ್ಥಾನಗಳಲ್ಲಿ ಸ್ಪರ್ಧಿಸುತ್ತಿವೆ. ಉಳಿದ ನಾಸಿಕ್ ಮತ್ತು ನಾಂದೇಡ್ ಸ್ಥಾನಗಳ ಕುರಿತು ಚರ್ಚೆಗಳು ಇನ್ನೂ ನಡೆಯುತ್ತಿವೆ. ವಿಧಾನ ಪರಿಷತ್ ಚುನಾವಣೆಗೆ ನಾಮಪತ್ರ ಸಲ್ಲಿಸಲು ಇಂದು ಕೊನೆಯ ದಿನವಾಗಿದೆ.

<><><>

ಪಶ್ಚಿಮ ಬಂಗಾಳ ಮುಖ್ಯಮಂತ್ರಿ ಸುವೇಂದು ಅಧಿಕಾರಿ ತಮ್ಮ ಸಚಿವ ಸಂಪುಟವನ್ನು ಇಂದು ವಿಸ್ತರಿಸಲಿದ್ದಾರೆ. ಮೂವತ್ತೈದು ನೂತನ ಸಚಿವರು ಸಚಿವ ಸಂಪುಟಕ್ಕೆ ಸೇರ್ಪಡೆಯಾಗಲಿದ್ದಾರೆ. ಲೋಕ ಭವನದಲ್ಲಿ ಬೆಳಗ್ಗೆ ೧೧ ಗಂಟೆಗೆ ಪ್ರಮಾಣ ವಚನ ಸ್ವೀಕಾರ ಸಮಾರಂಭ ನಡೆಯಲಿದೆ. ಈ ವಿಸ್ತರಣೆಯೊಂದಿಗೆ, ಪಶ್ಚಿಮ ಬಂಗಾಳ ಸಚಿವ ಸಂಪುಟದ ಒಟ್ಟು ಬಲ ೪೧ ಕ್ಕೆ ಏರಲಿದೆ.

<><><>

ಭಾರತ-ಆಸ್ಟ್ರೇಲಿಯಾ ರಕ್ಷಣಾ ಸಚಿವರ ಸಭೆ ದೆಹಲಿಯಲ್ಲಿ ಇಂದು ನಡೆಯಲಿದ್ದು, ಸಚಿವ ರಾಜನಾಥ್ ಸಿಂಗ್ ಮತ್ತು ಆಸ್ಟ್ರೇಲಿಯಾ ರಕ್ಷಣಾ ಸಚಿವ ರಿಚರ್ಡ್ ಮಾರ್ಲೆಸ್ ಜಂಟಿ ಅಧ್ಯಕ್ಷತೆ ವಹಿಸಲಿದ್ದಾರೆ. ದ್ವಿಪಕ್ಷೀಯ ರಕ್ಷಣಾ ಮತ್ತು ಸೇನಾ ಸಹಕಾರ ಬಲವರ್ಧನೆ, ರಕ್ಷಣಾ ಕೈಗಾರಿಕಾ ಪಾಲುದಾರಿಕೆ, ರಕ್ಷಣಾ ಪರಿಕರಗಳ ಸಹ-ಅಭಿವೃದ್ಧಿ ಮತ್ತು ಸಹ- ಉತ್ಪಾದನೆ ಮತ್ತಿತರ ವಿಷಯಗಳ ಕುರಿತು ಸಮಾಲೋಚನೆ ನಡೆಯಲಿದೆ. ರಕ್ಷಣೆ ಮತ್ತು ಭದ್ರತಾ ವಲಯದಲ್ಲಿ ಬಾಂಧವ್ಯ ಬಲವರ್ಧನೆ, ಭಾರತ-ಪೆಸಿಫಿಕ್ ವಲಯದಲ್ಲಿ ಸುಸ್ಥಿರತೆ ಮತ್ತು ಭದ್ರತೆ ಬಲಪಡಿಸುವುದು ಸೇರಿದಂತೆ ಹಲವು ವಿಷಯಗಳ ಬಗ್ಗೆ ಚರ್ಚೆ ನಡೆಯಲಿದೆ ಎಂದು ರಕ್ಷಣಾ ಸಚಿವಾಲಯ ತಿಳಿಸಿದೆ.

<><><>

ರಾಜಕೀಯ ನಾಯಕತ್ವವು ಸಾರ್ವಜನಿಕ ಜೀವನದ ಅತ್ಯಂತ ಬೇಡಿಕೆಯ ಕ್ಷೇತ್ರಗಳಲ್ಲಿ ಒಂದಾಗಿದ್ದು, ರಚನಾತ್ಮಕ ಟೀಕೆಗಳು ನ್ಯಾಯಯುತ ಮತ್ತು ಸಮತೋಲನದಲ್ಲಿರಬೇಕು ಎಂದು ಉಪರಾಷ್ಟ್ರಪತಿ ಸಿ.ಪಿ.ರಾಧಾಕೃಷ್ಣನ್ ಪ್ರತಿಪಾದಿಸಿದ್ದಾರೆ. ಅವರು ಕೇರಳದ ಕೊಟ್ಟಾಯಂನಲ್ಲಿ ದೀಪಿಕಾ ಮಲಯಾಳಂ ದಿನಪತ್ರಿಕೆಯ ೧೪೦ ನೇ ಸಂಸ್ಥಾಪನಾ ದಿನಾಚರಣೆಯನ್ನು ಉದ್ಘಾಟಿಸಿ ದೀಪಿಕಾ ಶ್ರೇಷ್ಠ ಪ್ರಶಸ್ತಿಗಳನ್ನು ಪ್ರದಾನ ಮಾಡಿದರು. ಈ ವೇಳೆ ಮಾತನಾಡಿದ ಅವರು, ಪತ್ರಿಕೋದ್ಯಮದ ನಿಜವಾದ ಧರ್ಮವೆಂದರೆ ಒಳ್ಳೆಯ ಕೆಲಸವನ್ನು ಶ್ಲಾಘಿಸುವುದು ಮತ್ತು ಅಗತ್ಯವಿದ್ದಾಗ ತಪ್ಪುಗಳನ್ನು ನಿರ್ಭಯವಾಗಿ ಟೀಕಿಸುವುದು ಎಂದು ಹೇಳಿದರು. ಪತ್ರಿಕೋದ್ಯಮವು ಕೇವಲ ಘಟನೆಗಳನ್ನು ವರದಿ ಮಾಡುವುದಕ್ಕಿಂತ ದೊಡ್ಡ ಸಾಮಾಜಿಕ ಜವಾಬ್ದಾರಿಯನ್ನು ಹೊಂದಿದೆ. ಪತ್ರಿಕೋದ್ಯಮವು ಭರವಸೆ, ನಾವೀನ್ಯತೆ, ಕರುಣೆ ಮತ್ತು ವೈಜ್ಞಾನಿಕ ಪ್ರಗತಿಯ ಕಥೆಗಳನ್ನು ಸಹ ಎತ್ತಿ ತೋರಿಸಬೇಕು. ಅಂತಹ

ರಚನಾತ್ಮಕ ಪತ್ರಿಕೋದ್ಯಮವು ಯುವಕರಲ್ಲಿ ಆತ್ಮವಿಶ್ವಾಸವನ್ನು ಬಲಪಡಿಸುತ್ತದೆ ಮತ್ತು ರಾಷ್ಟ್ರ ನಿರ್ಮಾಣದತ್ತ ಅವರನ್ನು ಪ್ರೇರೇಪಿಸುತ್ತದೆ ಎಂದು ಉಪರಾಷ್ಟ್ರಪತಿ ಸಿ.ಪಿ.ರಾಧಾಕೃಷ್ಣನ್ ಅಭಿಪ್ರಾಯಪಟ್ಟರು.

<><><>

ಕಳೆದ ೧೨ ವರ್ಷಗಳ ತಾಂತ್ರಿಕ ಪರಿವರ್ತನೆಯಲ್ಲಿ ಭಾರತ, ತಂತ್ರಜ್ಞಾನ ಅನುಯಾಯಿ ಸ್ಥಾನದಿಂದ ತಂತ್ರಜ್ಞಾನ ನಾಯಕನಾಗಿ ಬದಲಾಗಿದೆ ಎಂದು ಕೇಂದ್ರ ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವ ಡಾ. ಜಿತೇಂದ್ರ ಸಿಂಗ್ ಹೇಳಿದ್ದಾರೆ.ದೂರದರ್ಶನ ಪಾಡ್‌ಕ್ಯಾಸ್ಟ್‌ನಲ್ಲಿ ಮಾತನಾಡಿದ ಅವರು, ಜಾಗತಿಕ ಮಟ್ಟದಲ್ಲಿ ಗಡಿನಾಡು ತಂತ್ರಜ್ಞಾನಗಳ ಅಭಿವೃದ್ಧಿಯಲ್ಲಿ ಭಾರತ ಹೆಚ್ಚಾಗಿ ಭಾಗವಹಿಸುತ್ತಿದೆ ಮತ್ತು ನಾವೀನ್ಯತೆಯ ಭವಿಷ್ಯದ ದಿಕ್ಕನ್ನು ರೂಪಿಸುವಲ್ಲಿ ಸಹಾಯ ಮಾಡುತ್ತಿದೆ ಎಂದರು. ದೇಶವು ಬಾಹ್ಯಾಕಾಶ, ಪರಮಾಣು ಶಕ್ತಿ, ಕ್ವಾಂಟಮ್ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ, ಕೃತಕ ಬುದ್ಧಿಮತ್ತೆ ಮತ್ತು ಶುದ್ಧ ಇಂಧನದಲ್ಲಿ ಪ್ರಮುಖ ಪ್ರಗತಿಯನ್ನು ದಾಖಲಿಸಿದೆ ಎಂದು ತಿಳಿಸಿದರು. ಈ ವಲಯಗಳು ೨೦೪೭ ರ ವೇಳೆಗೆ ಅಭಿವೃದ್ಧಿ ಹೊಂದಿದ ಭಾರತಕ್ಕೆ ಅಗತ್ಯವಾದ ವೈಜ್ಞಾನಿಕ ಮತ್ತು ತಾಂತ್ರಿಕ ಅಡಿಪಾಯವನ್ನು ಸಾಮೂಹಿಕವಾಗಿ ರಚಿಸುತ್ತಿವೆ ಎಂದು ಸಚಿವ ಡಾ. ಜಿತೇಂದ್ರ ಸಿಂಗ್ ಹೇಳಿದರು. ಆಡಳಿತ, ಆರೋಗ್ಯ ರಕ್ಷಣೆ, ಕೃಷಿ, ಸಂವಹನ, ವೈಜ್ಞಾನಿಕ ಸಂಶೋಧನೆ ಮತ್ತು ಸಾರ್ವಜನಿಕ ಸೇವಾ ವಿತರಣೆಯಲ್ಲಿ ಕೃತಕ ಬುದ್ಧಿಮತ್ತೆ ಒಂದು ಪರಿವರ್ತನಾ ಶಕ್ತಿಯಾಗಿ ಹೊರಹೊಮ್ಮುತ್ತಿದೆ.  ದಕ್ಷತೆ, ನಾವೀನ್ಯತೆ ಮತ್ತು ನಾಗರಿಕ-ಕೇಂದ್ರಿತ ಆಡಳಿತವನ್ನು ಸುಧಾರಿಸಲು ಮಾನವ ಪರಿಣತಿಯನ್ನು ಕೃತಕ ಬುದ್ಧಿಮತ್ತೆ - ಸಕ್ರಿಯಗೊಳಿಸಿದ ವ್ಯವಸ್ಥೆಗಳೊಂದಿಗೆ ಸಂಯೋಜಿಸುವ ಸಮತೋಲಿತ ವಿಧಾನವನ್ನು ಭಾರತ ಅನುಸರಿಸುತ್ತಿದೆ ಎಂದು ಅವರು ಪ್ರತಿಪಾದಿಸಿದರು.

<><><>

ಕೇಂದ್ರೀಯ ಮಾಧ್ಯಮಿಕ ಶಿಕ್ಷಣ ಮಂಡಳಿ-ಸಿಬಿಎಸ್‌ಇ ತನ್ನ ಸೇವಾ ಪೂರೈಕೆದಾರರ ಆನ್‌ಮಾರ್ಕ್ ಪೋರ್ಟಲ್‌ನಲ್ಲಿ ಇತ್ತೀಚೆಗೆ ಸಾರ್ವಜನಿಕವಾಗಿ ಕಾಣಿಸಿಕೊಂಡಿರುವ ದೋಷಗಳನ್ನು ಸೂಕ್ಷ್ಮವಾಗಿ ಗಮನಿಸಲಾಗುತ್ತಿದೆ ಎಂದು ಹೇಳಿದೆ. ಸಾಮಾಜಿಕ ಜಾಲತಾಣದಲ್ಲಿ ಈ ವಿಷಯವಾಗಿ ಮಾಹಿತಿ ಹಂಚಿಕೊಂಡಿರುವ ಸಿಬಿಎಸ್‌ಇ, ಕಳೆದ ಕೆಲವು ದಿನಗಳಿಂದ ಈ ವ್ಯವಸ್ಥೆಗಳನ್ನು ಬಲಪಡಿಸಲು ಮತ್ತು ಪೋರ್ಟಲ್ ಅನ್ನು ಹೆಚ್ಚು ಸುರಕ್ಷಿತವಾಗಿಸಲು ವಿವಿಧ ಸರ್ಕಾರಿ ಸಂಸ್ಥೆಗಳು ಮತ್ತು ಭಾರತೀಯ ತಂತ್ರಜ್ಞಾನ ಸಂಸ್ಥೆಗಳ ಸೈಬರ್ ಭದ್ರತಾ ವೃತ್ತಿಪರರ ತಜ್ಞರ ತಂಡವನ್ನು ನಿಯೋಜಿಸಲಾಗಿದೆ ಎಂದು ತಿಳಿಸಿದೆ.

<><><>

ಗುಜರಾತ್‌ನ ಅಹಮದಾಬಾದ್‌ನಲ್ಲಿರುವ ನರೇಂದ್ರ ಮೋದಿ ಕ್ರಿಕೆಟ್ ಕ್ರೀಡಾಂಗಣದಲ್ಲಿ ನಿನ್ನೆ ನಡೆದ ಐಪಿಎಲ್ ಟಿ-೨೦ ಕ್ರಿಕೆಟ್ ಫೈನಲ್ ಪಂದ್ಯದಲ್ಲಿ ಗುಜರಾತ್ ಟೈಟಾನ್ಸ್ ವಿರುದ್ಧ ಐದು ವಿಕೆಟ್‌ಗಳಿಂದ ಗೆದ್ದ ರಾಯಲ್ ಚಾಲೆಂಜರ್ಸ್ ಬೆಂಗಳೂರು ಸತತ ಎರಡನೇ ಬಾರಿ ಚಾಂಪಿಯನ್ನಾಗಿ ಹೊರಹೊಮ್ಮಿದೆ. ಮೊದಲು ಬ್ಯಾಟಿಂಗ್ ಮಾಡಿದ ಗುಜರಾತ್ ಟೈಟಾನ್ಸ್ ನಿಗದಿತ ೨೦ ಓವರ್‌ಗಳಲ್ಲಿ ೮ ವಿಕೆಟ್ ನಷ್ಟಕ್ಕೆ ೧೫೫ ರನ್ ಗಳಿಸಿತು. ಆರ್‌ಸಿಬಿ ಪರ ರಸಿಕ್ ಸಲ್ಮಾನ್ ದರ್ ಮೂರು ವಿಕೆಟ್ ಕಬಳಿಸಿದರೆ, ಭುವನೇಶ್ವರ್ ಕುಮಾರ್ ಮತ್ತು ಜೋಶ್ ಹೇಸಲ್‌ವುಡ್ ತಲಾ ಎರಡು ವಿಕೆಟ್ ಪಡೆದರು. ಗೆಲುವಿನ ಗುರಿ ಬೆನ್ನಟ್ಟಿದ ರಾಯಲ್ ಚಾಲೆಂಜರ್ಸ್ ಬೆಂಗಳೂರು ೧೮ ಓವರ್‌ಗಳಲ್ಲಿ ೫ ವಿಕೆಟ್ ನಷ್ಟಕ್ಕೆ ೧೭೧ ರನ್ ಗಳಿಸುವ ಮೂಲಕ ಗೆಲುವಿನ ನಗೆ ಬೀರಿತು. ಆರ್‌ಸಿಬಿ ಪರ ವಿರಾಟ್ ಕೊಹ್ಲಿ ೪೨ ಎಸೆತಗಳಲ್ಲಿ ೭೫ ರನ್ ಸಿಡಿಸುವ ಮೂಲಕ ತಂಡದ ಗೆಲುವಿನಲ್ಲಿ ಪ್ರಮುಖ ಪಾತ್ರ ವಹಿಸಿದರು. ಅಲ್ಲದೇ ಪಂದ್ಯ ಶ್ರೇಷ್ಠ ಪ್ರಶಸ್ತಿಗೆ ಭಾಜನರಾದರು. ಸರಣಿಯಾದ್ಯಂತ ಬಹುತೇಕ ಪಂದ್ಯಗಳಲ್ಲಿ ಸಿಕ್ಸರ್‌ಗಳ

ಮೂಲಕ ಅದ್ಭುತ ಪ್ರದರ್ಶನ ತೋರಿದ ರಾಜಸ್ಥಾನ್ ರಾಯಲ್ಸ್ ತಂಡದ ೧೪ ವರ್ಷದ ಪೋರ ವೈಭವ್ ಸೂರ್ಯವಂಶಿ ಸರಣಿ ಶ್ರೇಷ್ಠ ಪ್ರಶಸ್ತಿಗೆ ಭಾಜನರಾದರು.

<><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <><>